# ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ

**6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560 003.**

ಸಂಖ್ಯೆ: ಸಿ1/ಕೀ.ಉ/ಪ.ಸ.ರ/16/2021–22 ದಿನಾಂಕ: 30.07.2021

## ಪ್ರಕಟಣೆ

2021ನೇ ಸಾಲಿನ ಜುಲೈ ಮಾಹೆಯಲ್ಲಿ ದಿನಾಂಕ:19.07.2021 ಮತ್ತು 22.07.2021ರಂದು ನಡೆದ ಎಸ್.ಎಸ್.ಎಲ್.ಸಿ. ಪರೀಕ್ಷೆಯ ಪ್ರಶ್ನೆಪತ್ರಿಕೆಗಳ ಕೀ ಉತ್ತರಗಳನ್ನು ಮಂಡಳಿಯ ವೆಬ್‌ಸೈಟ್‌ನಲ್ಲಿ ಅಳವಡಿಸಿ ವಿದ್ಯಾರ್ಥಿಗಳು/ಪೋಷಕರು & ಶಿಕ್ಷಕರಿಂದ ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸುವಂತೆ ತಿಳಿಸಲಾಗಿತ್ತು.

ಈ ಸಂಬಂಧ ಒಟ್ಟು 11 ವಿಷಯಗಳ ಕೀ ಉತ್ತರಗಳ ಮೇಲೆ ಆಕ್ಷೇಪಣೆಗಳು ಸಲ್ಲಿಕೆಯಾಗಿರುತ್ತವೆ. ಸದರಿ ಆಕ್ಷೇಪಣೆಗಳನ್ನು ಸಂಬಂಧಿಸಿದ ವಿಷಯ ತಜ್ಞರು/ಪರಿಶೀಲನಾ ಸಮಿತಿಯವರಿಂದ ಮತ್ತೊಮ್ಮೆ ಪರಿಶೀಲನೆಗೆ ಒಳಪಡಿಸಲಾಗಿತ್ತು.

ಒಟ್ಟು 11 ವಿಷಯಗಳ ಪೈಕಿ ಪ್ರಥಮ ಭಾಷೆ ಕನ್ನಡ(01K) ವಿಷಯದ ಪ್ರಶ್ನೆಪತ್ರಿಕೆಯ ಪ್ರಶ್ನೆ ಸಂಖ್ಯೆ 19ಕ್ಕೆ 01 ಕೃಪಾಂಕ ನೀಡಬಹುದೆಂದು ಪರಿಶೀಲನಾ ಸಮಿತಿಯವರು ಅಭಿಪ್ರಾಯ ನೀಡಿರುತ್ತಾರೆ. ಆದ್ದರಿಂದ ಸದರಿ ವಿಷಯದಲ್ಲಿ ಪರೀಕ್ಷೆ ಬರೆದ ಎಲ್ಲಾ ವಿದ್ಯಾರ್ಥಿಗಳಿಗೂ 01 ಕೃಪಾಂಕ ನೀಡಲಾಗಿದೆ.

ಉಳಿದಂತೆ ಎಲ್ಲಾ ವಿಷಯಗಳ ಕೀ ಉತ್ತರಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲವೆಂದು ಈ ಮೂಲಕ ಸ್ಪಷ್ಟೀಕರಣ ನೀಡಲಾಗಿದೆ.

(ವಿ. ಸುಮಂಗಲ)
ನಿರ್ದೇಶಕರು(ಪರೀಕ್ಷೆಗಳು)